ದೂರವಾಣಿ ಸಂಖ್ಯೆ : 080-22212343
ಫ್ಯಾಕ್ಸ್ ಸಂಖ್ಯೆ : 080-22278803
ಅಂತರ್ಜಾಲ : www.kptcl.com

ಇ-ಮೇಲ್ ವಿಳಾಸ :director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521
ಕಂಪನಿಯ ಅಧಿಕೃತ ಕಛೇರಿ : ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009.

**ಸಂಖ್ಯೆ: ಕವಿಪ್ರನಿನಿ/ಬಿ19/84/1994-95.** ದಿನಾಂಕ :

ವಿಷಯ: ವಿದ್ಯುತ್ ವಿತರಣಾ/ಸ್ವೀಕರಣಾ ಕೇಂದ್ರಗಳ ಪಾಳಿ ಮತ್ತು ನಿರ್ವಹಣೆ ಕೆಲಸಗಳನ್ನು ನಿರ್ವಹಿಸಲು ಕರೆಯುವ ಟೆಂಡರ್‌ನಲ್ಲಿ ಶೈಕ್ಷಣಿಕ ಅರ್ಹತೆ ನಿಗದಿಪಡಿಸುವ ಬಗ್ಗೆ.

ಉಲ್ಲೇಖ: ದಿನಾಂಕ: 11.03.2020 ರಂದು ನಡೆದ 119ನೇ ಕವಿಪ್ರನಿನಿ ಮಂಡಳಿ ನಿರ್ದೇಶಕರುಗಳ ಸಭೆಯ ನಿರ್ಣಯ-119/34

*****

**ಪೀಠಿಕೆ :-**

ಕವಿಪ್ರನಿನಿಯು ಮೂಲತಃ ಎಲೆಕ್ಟ್ರಿಕಲ್ ಇಂಜಿನಿಯರಿಂಗ್ ಸಂಸ್ಥೆಯಾಗಿದ್ದು, ಕಂಪ್ಯೂಟರ್ ಸೈನ್ಸ್/ಎಲೆಕ್ಟ್ರಾನಿಕ್ಸ್/ದೂರ ಸಂಪರ್ಕ ವಿಭಾಗದ ಪದವೀಧರರನ್ನು ನೇಮಕ ಮಾಡಿಕೊಳ್ಳುವುದು ಅನಿವಾರ್ಯವಾಗಿರುವುದಿಲ್ಲ ಎಂದು ಆಡಳಿತ ಮಂಡಳಿಯು ಗಮನಿಸಿ, ಕವಿಪ್ರನಿನಿ ವ್ಯಾಪ್ತಿಗೆ ಬರುವ ವಿದ್ಯುತ್ ಸ್ವೀಕರಣಾ ಕೇಂದ್ರಗಳ ಪಾಳಿ ಮತ್ತು ನಿರ್ವಹಣಾ ಕೆಲಸಗಳನ್ನು ನಿರ್ವಹಿಸಲು ಕೆ.ಟಿ.ಪಿ.ಪಿ ಕಾಯ್ದೆಯನ್ವಯ ಟೆಂಡರ್ ಪ್ರಕ್ರಿಯೆಗೊಳಪಡಿಸಿ ಹೊರಗಿನ ಏಜೆನ್ಸಿಗೆ ಗುತ್ತಿಗೆ ನೀಡಲಾಗುತ್ತಿದ್ದು, ಸದರಿ ಟೆಂಡರ್‌ನಲ್ಲಿ ಎಲೆಕ್ಟ್ರಿಕಲ್ ನಲ್ಲಿ ಇಂಜಿನಿಯರಿಂಗ್/ಡಿಪ್ಲಮೋ ವಿದ್ಯಾರ್ಹತೆಯನ್ನು ಮಾತ್ರ ಪರಿಗಣಿಸುವಂತೆ ತಿಳಿಸಲಾಗಿರುತ್ತದೆ. ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯೂನಿಕೇಷನ್ ನಲ್ಲಿ ಇಂಜಿನಿಯರಿಂಗ್ ಪದವಿ ಪಡೆದ ಹೊರಗುತ್ತಿಗೆ ಕೆಲಸಗಾರರುಗಳು ತಮ್ಮನ್ನು ಸೇವೆಯಲ್ಲಿ ಮುಂದುವರೆಸುವಂತೆ ಹಾಗೂ ಏಜೆನ್ಸಿಯವರು ಕೂಡ ಸದರಿ ಹೊರಗುತ್ತಿಗೆ ಕೆಲಸಗರರನ್ನು ಮುಂದುವರೆಸುವಂತೆ ರಾಜ್ಯ ಸರ್ಕಾರವನ್ನು ಮನವಿ ಮಾಡಿದ್ದು, ಸದರಿ ಮನವಿಯ ಬಗ್ಗೆ ದಿನಾಂಕ: 11.03.2020 ರಂದು ನಡೆದ 119/34ನೇ ಕವಿಪ್ರನಿನಿ ಮಂಡಳಿ ನಿರ್ದೇಶಕರು ಸಭೆಯಲ್ಲಿ ಚರ್ಚಿಸಿ, ಈ ಹಿಂದೆ ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯೂನಿಕೇಷನ್ ನಲ್ಲಿ ಇಂಜಿನಿಯರಿಂಗ್/ಡಿಪ್ಲಮೋ ಪದವಿ ಪಡೆದ ಪಾಳಿ ಇಂಜಿನಿಯರುಗಳ ಮನವಿಯನ್ನು ಪರಿಗಣಿಸುವಂತೆ ಮಂಡಳಿ ಸಭೆಯಲ್ಲಿ ತೀರ್ಮಾನಿಸಿದ ಹಿನ್ನಲೆಯಲ್ಲಿ, ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

**ಆದೇಶ ಸಂಖ್ಯೆ: ಕವಿಪ್ರನಿನಿ/ಬಿ19/84/94-95, ಬೆಂಗಳೂರು**

ದಿನಾಂಕ: 11 MAY 2020

ಕವಿಪ್ರನಿನಿ ವ್ಯಾಪ್ತಿಯಲ್ಲಿ ಬರುವ ವಿವಿಧ ವಿದ್ಯುತ್ ವಿತರಣಾ/ಸ್ವೀಕರಣಾ ಕೇಂದ್ರಗಳ ಪಾಳಿ ಮತ್ತು ನಿರ್ವಹಣೆ ಕೆಲಸಗಳನ್ನು ನಿರ್ವಹಿಸಲು ಕರೆಯುವ ಟೆಂಡರ್ ನಿಯಮಗಳಲ್ಲಿ ಈ ಕೆಳಕಂಡ ಕನಿಷ್ಠ ಶೈಕ್ಷಣಿಕ ವಿದ್ಯಾರ್ಹತೆಯನ್ನು ಪರಿಗಣಿಸುವಂತೆ ಆದೇಶಿಸಿದೆ.

1. ಶಿಫ್ಟ್ ಇಂಜಿನಿಯರ್‌ಗೆ ಮಾನ್ಯತೆ ಪಡೆದ ವಿಶ್ವವಿದ್ಯಾಲಯ/ವಿದ್ಯಾಸಂಸ್ಥೆ ಅಥವಾ ಎ.ಎಮ್.ಐ.ಇ(ಭಾರತ) ಅಥವಾ ಮಾನ್ಯತೆ ಪಡೆದ All India Council for Technical Education (AICTE) ನಿಂದ ಎಲೆಕ್ಟ್ರಿಕಲ್/ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್/ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯೂನಿಕೇಷನ್ ಇಂಜಿನಿಯರಿಂಗ್‌ನಲ್ಲಿ ಪದವಿ ಹೊಂದಿರಬೇಕು.

2. ಶಿಫ್ಟ್ ಅಪರೇಟರ್‌ಗೆ ಮಾನ್ಯ ರಾಜ್ಯ ಸರ್ಕಾರದ ತಾಂತ್ರಿಕ ಶಿಕ್ಷಣ ಇಲಾಖೆಯಿಂದ (Department of Technical Education) ನಿಂದ ಎಲೆಕ್ಟ್ರಿಕಲ್/ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್/ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯೂನಿಕೇಷನ್‌ನಲ್ಲಿ ಡಿಪ್ಲಮೋ ಹೊಂದಿರಬೇಕು.

(ನಿಗಮದ ಮಂಡಳಿಯ ಆದೇಶದ ಮೇರೆಗೆ)

ನಿರ್ದೇಶಕರು(ಆಡಳಿತ ಮತ್ತು ಮಾ.ಸಂ),
ಕವಿಪ್ರನಿನಿ.

**ಪ್ರತಿಯನ್ನು ಮಾಹಿತಿಗಾಗಿ:-**

1. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ.
2. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ.
3. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು (ಪ್ರಸರಣ)/ನಿರ್ದೇಶಕರು (ಹಣಕಾಸು)/ನಿರ್ದೇಶಕರು (ಆಡಳಿತ ಮತ್ತು ಮಾನವ ಸಂಪನ್ಮೂಲ), ಕವಿಪ್ರನಿನಿ, ನಿಗಮ ಕಾರ್ಯಾಲಯ, ಬೆಂಗಳೂರು.
4. ಕಂಪನಿ ಕಾರ್ಯದರ್ಶಿ, ಕವಿಪ್ರನಿನಿ, ನಿಗಮ ಕಾರ್ಯಾಲಯ, ಬೆಂಗಳೂರು.

**ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ www.kptcl.com/eprasarana ಅಂತರ್ಜಾಲದಲ್ಲಿ ಪ್ರಕಟಿಸಲಾಗಿದೆ**

1. ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ), ಪ್ರಸರಣ (ಕಾ ಮತ್ತು ನಿ)ವೃತ್ತ, ಕವಿಪ್ರನಿನಿ.
2. ಎಲ್ಲಾ ಉಪಲೆಕ್ಕನಿಯಂತ್ರಣಾಧಿಕಾರಿ, ಪ್ರಸರಣ (ಕಾ ಮತ್ತು ನಿ)ವೃತ್ತ, ಕವಿಪ್ರನಿನಿ.
3. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್, ಕವಿಪ್ರನಿನಿ.
4. ಎಲ್ಲಾ ಲೆಕ್ಕಾಧಿಕಾರಿಗಳು, ಕವಿಪ್ರನಿನಿ.

**ಪ್ರತಿಯನ್ನು ಮಾಹಿತಿಗಾಗಿ ರವಾನಿಸಿದೆ:-**

1. ಶ್ರೀ.ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು ಕವಿಪ್ರನಿನಿ ನೌಕರರ ಸಂಘ (ನೋಂದಣಿ ಸಂಖ್ಯೆ:659), ಬೆಂಗಳೂರು ಮತ್ತು ನಿರ್ದೇಶಕರು ಕವಿಪ್ರನಿನಿ ಮತ್ತು ಎಲ್ಲಾ ಎಸ್ಕಾಂಗಳು.
2. ಶ್ರೀ.ಟಿ.ಎಂ.ಶಿವಪ್ರಕಾಶ್, ಅಧ್ಯಕ್ಷರು, ಕವಿಮಂ ಇಂಜಿನಿಯರ್‌ಗಳ ಸಂಘ, ಬೆಂಗಳೂರು ಮತ್ತು ನಿರ್ದೇಶಕರು ಕವಿಪ್ರನಿನಿ ಮತ್ತು ಎಲ್ಲಾ ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ, ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ(ರಿ), ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಡಿಪ್ಲೋಮಾ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ಎಸ್ಕಾಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಅಧಿಕಾರಿಗಳ ಸಂಘ, ಬೆಂಗಳೂರು.